ಆಗಸ್ಟ್-2022

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಸ್ವಚ್ಛ ಭಾರತ ಒಂದು ಹೆಜ್ಜೆ ಸ್ವಚ್ಛತೆಯ ಕಡೆಗೆ | ಸ್ವಚ್ಛ ಸಂಕೀರ್ಣ | ಸ್ವಚ್ಛಮೇವ ಜಯತೇ

# ಸ್ವಚ್ಛತಾವಾಣಿ

ವಾರ್ತಾಪತ್ರ

ಜಲೋತ್ಸವ ಮನೆ ಮನೆಗೆ ಗಂಗೆ | Har Ghar Jal Jal Jeevan Mission

## "ಗ್ರಾಮ ನೈರ್ಮಲ್ಯ ಯೋಜನೆ" ತಯಾರಿಸಲು ವಿಶೇಷ ಆಂದೋಲನ

**"ಸ್ವಚ್ಛ ಭಾರತ್ ಮಿಷನ್ (ಗ್ರಾಮೀಣ)"** ಹಂತ-2ರಲ್ಲಿನ ಓ.ಡಿ.ಎಫ್ ಪ್ಲಸ್ ಸಾಧನೆಗಾಗಿ ರಾಜ್ಯದ ಎಲ್ಲಾ ಗ್ರಾಮ, ಗ್ರಾಮ ಪಂಚಾಯತ್ ಮಟ್ಟದಲ್ಲಿ ಆಗಸ್ಟ್ 15 ರಿಂದ ಅಕ್ಟೋಬರ್ 2 ರವರೆಗೆ Village Sanitation Plan (VSP)- ನೈರ್ಮಲ್ಯ ಕ್ರಿಯಾ ಯೋಜನೆ ಸಂಬಂಧ ವಿಶೇಷ ಆಂದೋಲನವನ್ನು ಹಮ್ಮಿಕೊಳ್ಳಲಾಗಿದೆ. ಈ ಸಂಬಂಧ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿ ಮಟ್ಟದಲ್ಲಿ ಗ್ರಾಮ ನೈರ್ಮಲ್ಯ ಯೋಜನೆ ರೂಪಿಸಲು ಕಾರ್ಯಗಾರ ಮತ್ತು ಪ್ರಾತ್ಯಕ್ಷಿಕೆಗಳು ನಡೆಯುತ್ತಿದೆ.







## Orientation of SBM (G) officials

ಕೇಂದ್ರ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯು ಶ್ರೀಮತಿ ವಿನಿ ಮಹಾಜನ್ ಮುಖ್ಯ ಕಾರ್ಯದರ್ಶಿ ಇವರ ಅಧ್ಯಕ್ಷತೆಯಲ್ಲಿ ಎಲ್ಲಾ ರಾಜ್ಯದ ಕಾರ್ಯದರ್ಶಿಗಳು, ಯೋಜನಾ ನಿರ್ದೇಶಕರಿಗೆ ನವದೆಹಲಿಯಲ್ಲಿ ಸ್ವಚ್ಛ ಭಾರತ್ ಮಿಷನ್ (ಗ್ರಾ) ಕುರಿತು ಓರಿಯಂಟೇಶನ್ ಮತ್ತು ಸಂವಹನ ಕಾರ್ಯಕ್ರಮ ಆಯೋಜಿಸಿತ್ತು. ಶ್ರೀ ಗಂಗಾಧರ ಸ್ವಾಮಿ ನಿರ್ದೇಶಕರು RDWSD ಮತ್ತು ಶ್ರೀ SC ಮಹೇಶ್ ಉಪಕಾರ್ಯದರ್ಶಿ(ಅಭಿವೃದ್ಧಿ) ರವರು ಕರ್ನಾಟಕದಿಂದ ಭಾಗಿಯಾಗಿದ್ದರು.









## JJM ಅನುಷ್ಠಾನದ ಕುರಿತು ಪ್ರಗತಿ ಪರಿಶೀಲನೆ ಸಭೆ

ಶ್ರೀ ಎಲ್. ಕೆ. ಅತೀಕ್, ಅಪರ ಮುಖ್ಯ ಕಾರ್ಯದರ್ಶಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಅಧ್ಯಕ್ಷತೆಯಲ್ಲಿ ಮಂಡ್ಯ ಜಿಲ್ಲೆಯ ಜಲ ಜೀವನ್ ಮಿಷನ್ ಕುರಿತು ಪ್ರಗತಿ ಪರಿಶೀಲನೆ ಸಭೆ ನಡೆಯಿತು. ಈ ಸಂದರ್ಭದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.





## ಬಹುಗ್ರಾಮ ಕುಡಿಯುವ ನೀರಿನ ಘಟಕಕ್ಕೆ ಭೇಟಿ

ಗ್ರಾ.ಕು.ನೀ ಮತ್ತು ನೈ ಇಲಾಖೆಯ ನಿರ್ದೇಶಕರಾದ ಶ್ರೀ ಗಂಗಾಧರ ಸ್ವಾಮಿ ರವರು ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ಬಹುಗ್ರಾಮ ಕುಡಿಯುವ ನೀರಿನ ಘಟಕಕ್ಕೆ ಭೇಟಿ ನೀಡಿ ವಿವಿಧ ಘಟಕಾಂಶಗಳನ್ನು ಪರಿಶೀಲನೆ ಮಾಡಿದರು. ಈ ಸಂದರ್ಭದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.







## ತರಬೇತಿ ಕಾರ್ಯಕ್ರಮಗಳು

### ರಾಜ್ಯಮಟ್ಟದಲ್ಲಿ Empanel ಆಗಿರುವ SQM ಅಭ್ಯರ್ಥಿಗಳಿಗೆ ತರಬೇತಿ

ಜಲ್ ಜೀವನ ಮಿಷನ್ ಯೋಜನೆಯ ಕಾಮಗಾರಿಗಳ ಗುಣಮಟ್ಟವನ್ನು ಪರೀಕ್ಷಿಸಲು ರಾಜ್ಯಮಟ್ಟದಲ್ಲಿ Empanel ಆಗಿರುವ SQM ಅಭ್ಯರ್ಥಿಗಳಿಗೆ ಮೂರು ದಿನಗಳ ತರಬೇತಿಯನ್ನು ಬೆಂಗಳೂರಿನಲ್ಲಿ ಆಯೋಜಿಸಲಾಗಿತ್ತು. ಕಾರ್ಯಕ್ರಮವನ್ನು ಶ್ರೀ ಎಲ್.ಕೆ ಅತಿಕ್ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತಿ ಇಲಾಖೆ ಇವರು ಉದ್ಘಾಟಿಸಿ ಶಿಬಿರಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದರು. ಕಾರ್ಯಗಾರದಲ್ಲಿ ಶ್ರೀ ಗಂಗಾಧರ ಸ್ವಾಮಿ ಜಿ.ಎಂ ನಿರ್ದೇಶಕರು RDWSD, ಶ್ರೀ ಎಜಾಜ್ ಹುಸೇನ್ ಮುಖ್ಯ ಅಭಿಯಂತರರು, ಅಧಿಕ್ಷಕ ಅಭಿಯಂತರರು ಸೇರಿದಂತೆ ಕೇಂದ್ರ ಕಚೇರಿಯ ತಾಂತ್ರಿಕ ಸಿಬ್ಬಂದಿ ಭಾಗವಹಿಸಿದ್ದರು.






## ಓಡಿಎಫ್ ಪ್ಲಸ್ ಘಟಕಾಂಶಗಳ ಬಗ್ಗೆ ತರಬೇತಿ

ಎಸ್.ಬಿ.ಎಂ (ಜಿ) ಯೋಜನೆಯ ಓಡಿಎಫ್ ಪ್ಲಸ್ ಘಟಕಾಂಶಗಳನ್ನು ರಾಜ್ಯದ್ಯಂತ ಯಶಸ್ವಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ರಾಜ್ಯ ಮತ್ತು ಜಿಲ್ಲೆಗಳಲ್ಲಿ ಆಯ್ದ ವ್ಯಕ್ತಿಗಳಿಗೆ 5 ದಿನಗಳ Master trainers ತರಬೇತಿಯನ್ನು ಯೂನಿಸೆಫ್ ಸಹಾಯೋಗದೊಂದಿಗೆ ಧಾರವಾಡ ಮತ್ತು ಜಿಲ್ಲೆಯಲ್ಲಿ ಆಯೋಜಿಸಲಾಗಿತ್ತು. ಕಾರ್ಯಾಗಾರವನ್ನು ಗಂಗಾಧರ ಸ್ವಾಮಿ ಜಿ.ಎಂ, ನಿರ್ದೇಶಕರು, ಗ್ರಾ.ಕು.ನೀ ಮತ್ತು ನೈ ಇಲಾಖೆ ರವರು ಉದ್ಘಾಟಿಸಿದರು. ಬಳಿಕ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸೇರಿದಂತೆ ಹಿರಿಯ ಅಧಿಕಾರಿಗಳೊಂದಿಗೆ ಜೆಜೆಎಂ ಮತ್ತು ಎಸ್.ಬಿ.ಎಂ (ಜಿ) ಯೋಜನೆಗಳ ಅನುಷ್ಠಾನ ಕಾಮಗಾರಿಗಳನ್ನು ವಿವಿಧ ಗ್ರಾಮ ಪಂಚಾಯಿತಿಗಳಿಗೆ ಭೇಟಿ ನೀಡಿ ಪರಿಶೀಲಿಸಿದರು.



## ಮಾಸ್ಟರ್ ಟ್ರೈನರ್ ಗಳಿಗೆ 5 ದಿನಗಳ ಕಾರ್ಯಾಗಾರ

ಗ್ರಾ.ಕು.ನೀ ಮತ್ತು ನೈ ಇಲಾಖೆಯ ನಿರ್ದೇಶಕರಾದ ಶ್ರೀ ಗಂಗಾಧರ ಸ್ವಾಮಿ ಜಿ.ಎಂ ಅವರ ಅಧ್ಯಕ್ಷತೆಯಲ್ಲಿ ಮೈಸೂರಿನಲ್ಲಿ ODF ಪ್ಲಸ್ ಘಟಕಾಂಶಗಳ ಬಗ್ಗೆ ಮಾಸ್ಟರ್ ಟ್ರೈನರ್ ಗಳಿಗೆ 5 ದಿನಗಳ ತರಬೇತಿಯನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಜಿಲ್ಲಾ ಯೋಜನಾ ವ್ಯವಸ್ಥಾಪಕರು ಭಾಗಿಯಾಗಿದ್ದರು.

## ಮಾಸ್ಟರ್ ಟ್ರೈನರ್ಸ್ ತರಬೇತಿ

ಶ್ರೀಮತಿ ಶೀತಲ್ ಸಿಂಗ್ ನಿರ್ದೇಶಕರು ISA ರವರು ಮೈಸೂರಿನಲ್ಲಿ ಜಿಲ್ಲಾ ಎಸ್.ಬಿ.ಎಮ್(ಜಿ)ನೋಡಲ್ ಅಧಿಕಾರಿ ಮತ್ತು ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ODF Plus ಘಟಕಾಂಶಗಳ ಕುರಿತು ಆಯೋಜಿಸಿದ್ದ ಮಾಸ್ಟರ್ ಟ್ರೈನರ್ಸ್ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಈ ವೇಳೆ UNICEF ಪ್ರತಿನಿಧಿಗಳು ಸೇರಿದಂತೆ ಇತರ ಅಧಿಕಾರಿಗಳು ಉಪಸ್ಥಿತರಿದ್ದರು.







**ನೀರು ಮತ್ತು ನೈರ್ಮಲ್ಯಕ್ಕೆ ಸಂಬಂಧಪಟ್ಟ ಸಮಸ್ಯೆಗಳಿದ್ದಲ್ಲಿ ಕರೆ ಮಾಡಿ 9480985555**

ನಮ್ಮನ್ನು ಹಿಂಬಾಲಿಸಿ : swachhamevajayate.org rdpr.karnataka.gov.in